ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಪಡಿತರ ಚೀಟಿಗೆ ಆಧಾರ್ ಜೋಡಣೆಯ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

511 (742) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪಡಿತರ ವ್ಯವಸ್ಥೆಗೆ ಪಾರದರ್ಶಕತೆ ತರಲು ಹಾಗೂ ಸೋರಿಕೆ ತಡೆಗಟ್ಟಲು ಪಡಿತರ ಚೀಟಿಗೆ ಆಧಾರ್ ಸಂಖ್ಯೆ ಜೋಡಣೆ ಮಾಡುವ ಯೋಜನೆ ಜಾರಿಗೊಳಿಸಿದ್ದು, ಸದರಿ ಪ್ರಕ್ರಿಯೆ ಪೂರ್ಣಗೊಂಡಿದೆಯೇ ;

(ಆ) ಆಧಾರ್ ಜೋಡಣೆಯಿಂದ ಎಷ್ಟು ನಕಲಿ ಕಾರ್ಡ್‌ಗಳನ್ನು ಪತ್ತೆ ಹಚ್ಚಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ನಕಲಿ ಕಾರ್ಡ್‌ಗಳನ್ನು ಹೊಂದಿದವರ ಮೇಲೆ ಯಾವ ರೀತಿಯ ಕಾನೂನು ಕ್ರಮ ಕೈಗೊಳ್ಳಲಾಗಿದೆ ;

(ಈ) ನಕಲಿ ಕಾರ್ಡ್ ಹೊಂದಿರುವವರ ಪಟ್ಟಿಯಲ್ಲಿ ಕರ್ನಾಟಕ ಯಾವ ಸ್ಥಾನದಲ್ಲಿದೆ ?